ಕರ್ನಾಟಕ ಸರ್ಕಾರ

(ಸಾರಿಗೆ ಇಲಾಖೆ)

ಮಾಹಿತಿ ಹಕ್ಕು ಅಧಿ ನಿಯಮ 2005– ಅಧ್ಯಾಯ 2 ನಿಯಮ 4(1) ಬಿ ಪ್ರಕಾರ ಪ್ರಕಟಿಸಿದ ಮಾಹಿತಿ

1) 4(ಬಿ)I. ಅದರ ರಚನೆ, ಕಾರ್ಯಗಳು ಮತ್ತು ಕರ್ತವ್ಯಗಳ ವಿವರಗಳು:

ಸಂಘಟನೆ:– ಪ್ರಾದೇಶಿಕ ಸಾರಿಗೆ ಅಧಿಕಾರಿರವರು ಈ ಕಚೇರಿಯ ಮುಖ್ಯಸ್ಥರಾಗಿರುತ್ತಾರೆ ಮತ್ತು ಈ ಕೆಳಕಂಡ ಅಧಿಕಾರಿಗಳು ಇವರ ಅಧೀನದಲ್ಲಿ ಕಾರ್ಯನಿರ್ವಹಿಸಿರುತ್ತಾರೆ.

| | |
|---|---|
| ಅ)ಹಿರಿಯ ಮೋಟಾರು ವಾಹನ ನಿರೀಕ್ಷಕರು | 2 |
| ಆ) ಮೋಟಾರು ವಾಹನ ನಿರೀಕ್ಷಕರು | 2 |
| ಇ) ಕಚೇರಿ ಅಧೀಕ್ಷಕರು | 2 |
| ಈ) ಪ್ರಥಮ ದರ್ಜೆ ಸಹಾಯಕರು | 3 |
| ಉ) ದ್ವಿತಿಯ ದರ್ಜೆ ಸಹಾಯಕರು | 1 |
| ಊ) ಶೀಘ್ರಲಿಪಿಗಾರರು | – |
| ಋ) ಬೆರಳಚ್ಚುಗಾರರು | – |
| ಎ) ಹಿರಿಯ/ವಾಹನ ಚಾಲಕರು | – |
| ಏ) ಖಜಾನೆ ಕಾವಲುಗಾರ | – |
| ಐ) ಗ್ರೂಪ್ ಡಿ ನೌಕರರು | 2 |
| ಒ) ಪ್ರಾದೇಶಿಕ ಸಾರಿಗೆ ಅಧಿಕಾರಿಗಳು | – |

ಈ ಕಚೇರಿಯಲ್ಲಿ ಮುಖ್ಯವಾಗಿ ಸಾರಿಗೆ ಮತ್ತು ಸಾರಿಗೇತರ ವಾಹನಗಳ ನೋಂದಣಿ, ತೆರಿಗೆ ವಸೂಲಾತಿ, ಕಲಿಕಾ ಚಾಲನಾ ಅನುಜ್ಞಾ ಪತ್ರ,ಚಾಲನಾ ಅನುಜ್ಞಾ ಪತ್ರ ಮತ್ತು ವಾಹನಗಳ ಉಪಯೋಗದ ನಿಯಂತ್ರಣದ ಬಗ್ಗೆ ಈ ಕೆಳಕಂಡ ಕಾಯ್ದೆ ನಿಯಮದ ಅಡಿಯಲ್ಲಿ ಕಾರ್ಯ ನಿರ್ವಹಿಸಲಾಗುತ್ತದೆ.

1) ಕೇಂದ್ರ ಮೋಟಾರು ವಾಹನಗಳ ಕಾಯ್ದೆ 1988
2) ಕೇಂದ್ರ ಮೋಟಾರು ವಾಹನಗಳ ಕಾಯ್ದೆ ನಿಯಮಗಳು, 1989
3) ಕರ್ನಾಟಕ ಮೋಟಾರು ವಾಹನ ನಿಯಮಗಳು 1989
4) ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ ಮತ್ತು ನಿಯಮಗಳು 1957 ಮತ್ತು ಸಂಬಂಧಿಸಿದ ತಿದ್ದುಪಡಿಗಳು.

ಪ್ರಮುಖ ಕಾರ್ಯಗಳು:–

1) ವಾಹನಗಳ ನೋಂದಣಿ
2) ಚಾಲನಾ ಹಾಗೂ ನಿರ್ವಾಹಕ ಅನುಜ್ಞಾ ಪತ್ರಗಳನ್ನು ನೀಡುವಿಕೆ
3) ಸರಕು ಸಾಗಣೆ ಹಾಗೂ ಪ್ರಯಾಣಿಕ ವಾಹನಗಳಿಗೆ ರಹದಾರಿಗಳನ್ನು ನೀಡುವಿಕೆ
4) ಮೋಟಾರು ವಾಹನಗಳ ತೆರಿಗೆ ಸಂಗ್ರಹಣೆ
5) ಮೋಟಾರು ವಾಹನ ನಿಯಮಗಳ ಪ್ರವರ್ತನೆ
6) ರಸ್ತೆ ಸುರಕ್ಷತಾ ಕ್ರಮಗಳು
7) ವಾಹನಗಳಿಂದಾಗುವ ವಾಯು ಮಾಲಿನ್ಯ ನಿಯಂತ್ರಣದ ಬಗ್ಗೆ ಪ್ರವರ್ತನ
8) ಹೆಚ್ಚಿನ ರಾಜಸ್ವವನ್ನು ಸಂಗ್ರಹಿಸುವುದು.

2) 4(ಬಿ)2. ಅದರ ಅಧಿಕಾರಿಗಳ ಮತ್ತು ನೌಕರರ ಅಧಿಕಾರಿಗಳನ್ನು ಮತ್ತು ಕರ್ತವ್ಯಗಳು:

ಕಚೇರಿ ವಿಳಾಸ:- ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಹಾಗೂ ಕಾರ್ಯದರ್ಶಿ, ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಕಚೇರಿ, ಚಾಮರಾಜನಗರ.

1. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು:- ಕಚೇರಿಯ ಮುಖ್ಯಸ್ಥರಾಗಿದ್ದು, ಕಚೇರಿಯ ಸಂಪೂರ್ಣ ಜವಾಬ್ದಾರಿ ನಿರ್ವಹಿಸುತ್ತಾರೆ. ಕಚೇರಿಯ ಯಾವುದೇ ಕೆಲಸಕ್ಕೆ ಸಂಬಂಧಿಸಿದಂತೆ ಅಂತಿಮ ತೀರ್ಮಾನ ತೆಗೆದುಕೊಳ್ಳುವ ಅದಿಕಾರ ಹೊಂದಿರುತ್ತಾರೆ. ಸಿಬ್ಬಂದಿಯ ನಿಯಂತ್ರಣ, ಕೆಲಸದ ಹಂಚಿಕೆಯನ್ನು ಮಾಡುವ ಅಧಿಕಾರವನ್ನು ಹೊಂದಿರುತ್ತಾರೆ. ಹಾಗೆಯೇ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಕಾರ್ಯದರ್ಶಿ ಹಾಗೂ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯರು ಮತ್ತು ಕಚೇರಿಯ ಸಾರ್ವಜನಿಕ ಮಾಹಿತಿ ಅಧಿಕಾರಿಯಾಗಿಯೂ ಸಹ ಕಾರ್ಯನಿರ್ವಹಿಸುತ್ತಾರೆ.
2. ಹಿರಿಯ / ಮೋಟಾರು ವಾಹನ ನಿರೀಕ್ಷಕರು:- ಮೋಟಾರು ವಾಹನ ಕಾಯ್ದೆ ಹಾಗೂ ನಿಯಮಗಳನುಸಾರ ಸಾರಿಗೆ ವಾಹನಗಳ ನೋಂದಣಿ ನವೀಕರಣ ಹಾಗೂ ಅರ್ಹತಾ ಪತ್ರ ನವೀಕರಣಕ್ಕೆ ಸಂಬಂಧಿಸಿದಂತೆ ವಾಹನವನ್ನು ಪರಿಶೀಲಿಸಿ ಪ್ರಮಾಣ ಪತ್ರ ನೀಡುವುದು ಮತ್ತು ಅಭ್ಯರ್ಥಿಗಳನ್ನು ಪರೀಕ್ಷಿಸಿ ನಿರ್ವಾಹಕ, ಕಲಿಕಾ ಚಾಲನಾ ಅನುಜ್ಞಾ ಪ್ರಮಾಣ ಪತ್ರ ನೀಡುವುದು, ವಾಹನಗಳ ತಪಾಸಣೆ, ಅಪಘಾತ ವಾಹನಗಳ ವೀಕ್ಷಣೆ, ಬಾಕಿ ತೆರಿಗೆ ವಸೂಲಿ ಸೇರಿದಂತೆ ಇನ್ನಾವುದೇ ಮೇಲಾಧಿಕಾರಿಗಳ ಆದೇಶದಂತೆ ಕಾರ್ಯನಿರ್ವಹಿಸುವುದು.
3. ಕಚೇರಿ ಅಧೀಕ್ಷಕರು:- ಕಚೇರಿಯ ಅಧೀಕ್ಷಕರು ಸಾರ್ವಜನಿಕರು ಸಲ್ಲಿಸುವ ವಿವಿಧ ಕಚೇರಿ ಕೆಲಸಗಳ ಅರ್ಜಿಗಳನ್ನು ಪರಿಶೀಲಿಸಿ ಸ್ವೀಕರಿಸುವುದು. ದೈನಂದಿನ ರಾಜಸ್ವ ವಸೂಲಾತಿಯ ಅಂಕಿ ಅಂಶಗಳ ಸಂಗ್ರಹಣೆ ಸೇರಿದಂತೆ ಒಟ್ಟಾರೆಯಾಗಿ ಕಚೇರಿಯ ಸಿಬ್ಬಂದಿಗಳ ಕೆಲಸ ಕಾರ್ಯಗಳ ಮೇಲ್ವಿಚಾರಣೆ ಹಾಗೂ ಮೇಲಾಧಿಕಾರಿಗಳು ನೀಡಿದ ಆದೇಶ ಪಾಲಿಸುವುದು.
4. ಪ್ರಥಮ/ದ್ವಿತೀಯ ದರ್ಜೆ ಸಹಾಯಕರು:- ಕಚೇರಿಯ ಅಧೀಕ್ಷಕರು/ಮೇಲಾಧಿಕಾರಿಗಳು ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಕಡತದೊಂದಿಗೆ ಮುಂದಿನ ಆದೇಶಕ್ಕಾಗಿ ಅಧೀಕ್ಷಕರಿಗೆ ಸಲ್ಲಿಸುವುದು. ಕಡತದಲ್ಲಿ ಮೇಲಾಧಿಕಾರಿಗಳು ನೀಡಿದ ಆದೇಶವನ್ನು ಪಾಲಿಸಿ ಸಾರ್ವಜನಿಕರ ಕಚೇರಿ ಕೆಲಸ ಕಾರ್ಯಗಳನ್ನು ನಿರ್ವಹಿಸುವುದು.
5. ಬೆರಳಚ್ಚುಗಾರರು:- ಕಚೇರಿಯಿಂದ ಹೊರಡಿಸುವ ಎಲ್ಲಾ ಪತ್ರಗಳನ್ನು ಬೆರಳಚ್ಚು ಮಾಡುವುದು, ರಹದಾರಿ ಪರವಾನಿಗೆಗಳನ್ನು ಬೆರಳಚ್ಚಿಸುವುದು ಹಾಗೂ ಮೇಲಾಧಿಕಾರಿಗಳು ಹೇಳಿದ ಇತರ ಕೆಲಸಗಳನ್ನು ನಿರ್ವಹಿಸುವುದು
6. ವಾಹನ ಚಾಲಕರು:- ಕಚೇರಿಯ ಎಲ್ಲಾ ಕೆಲಸ ಕಾರ್ಯಗಳಿಗೆ ನಿಗಧಿಪಡಿಸಿದ ವಾಹನವನ್ನು ಚಲಿಸುವುದು
7. ಡಿ ಗ್ರೂಪ್ ನೌಕರರು (ಜವಾನರು):- ಸ್ಥಳೀಯ ಟಪಾಲನ್ನು ವಿತರಿಸುವುದು ಮತ್ತು ಮೇಲಾಧಿಕಾರಿಗಳ ಆದೇಶದ ಮೇರೆಗೆ ಕೆಲಸ ನಿರ್ವಹಿಸುವುದು

3) *4(ಬಿ)3. ಮೇಲ್ವಿಚಾರಣೆ ಮತ್ತು ಹೊಣೆಗಾರಿಕೆಯ ಮಾರ್ಗಗಳು ಸೇರಿದಂತೆ ತೀರ್ಮಾನ* ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕಾರ್ಯವಿಧಾನಗಳು.

ಸಾರ್ವಜನಿಕರು ವಿವಿಧ ಕೆಲಸಗಳಿಗಾಗಿ ಕಚೇರಿಗೆ ಸಲ್ಲಿಸುವ ಅರ್ಜಿಗಳನ್ನು ನಿಯಮಾನುಸಾರ ಕಚೇರಿಯಲ್ಲಿನ ಅಧೀಕ್ಷಕರುಗಳು ಪರಿಶೀಲಿಸಿ ಸ್ವೀಕರಿಸಿರುತ್ತಾರೆ. ತದನಂತರ ಕಚೇರಿಯ ಸ್ವೀಕೃತಿ ವಿಭಾಗದ ಮುಖಾಂತರ ಆಯಾ ವಿಭಾಗಗಳನ್ನು ನಿರ್ವಹಿಸುವ ವಿಷಯ ನಿರ್ವಾಹಕರು ತಮಗೆ ಸಂಬಂಧಿಸಿದ ಅರ್ಜಿಗಳನ್ನು ಕಡತದಲ್ಲಿ ಟಿಪ್ಪಣಿಯೊಂದಿಗೆ ವಿಷಯವನ್ನು ಮಂಡಿಸುತ್ತಾರೆ. ನಂತರ ಅದನ್ನು ಸಂಬಂದಿಸ್ಸಿದ ಅಧೀಕ್ಷಕರು ಪರಿಶೀಲಿಸಿ ತಮ್ಮ ಟಿಪ್ಪಣಿಯನ್ನು ಮಂಡಿಸಿದ ನಂತರ ಅಂತಿಮವಾಗಿ ಕಚೇರಿ ಮುಖ್ಯಸ್ಥರು ಸದರಿ ವಿಷಯದ ಕಡತಕ್ಕೆ ತಮ್ಮ ತೀರ್ಮಾನದ ಆದೇಶವನ್ನು ನೀಡುತ್ತಾರೆ. ಸದರಿಯವರು ನೀಡಿದ ಆದೇಶವನ್ನು ಅಂತಿಮವಾಗಿ ವಿಷಯ ನಿರ್ವಾಹಕರು ಮತ್ತು ಅಧೀಕ್ಷಕರುಗಳು ಪಾಲಿಸುತ್ತಾರೆ.

ಕೆಲವೊಂದು ವಿಷಯಗಳಿಗೆ ಸಂಬಂಧಿಸಿದ ಕೆಲಸಗಳಿಗೆ ಕಚೇರಿಯ ತಾಂತ್ರಿಕ ಸಿಬ್ಬಂದಿಗಳಾದ ಹಿರಿಯ / ಮೋಟಾರು ವಾಹನ ನಿರೀಕ್ಷಕರುಗಳ ಪರಿಶೀಲನೆ ಅವಶ್ಯಕವಾಗಿದ್ದು, ಅಂತಹ ಅರ್ಜಿಗಳನ್ನು ಕಚೇರಿ ಅಧೀಕ್ಷಕರು ಪರಿಶೀಲಿಸಿ ಸ್ವೀಕರಿಸಿದ ನಂತರ ತಾಂತ್ರಿಕ ಸಿಬ್ಬಂದಿಗಳು ತಾವು ಸಹ ವಾಹನವನ್ನು / ಅಬ್ಯರ್ಥಿಗಳನ್ನು ಭೌತಿಕವಾಗಿ-ತಾಂತ್ರಿಕವಾಗಿ ಪರಿಶೀಲಿಸಿ ಕಚೇರಿ ಮುಖ್ಯಸ್ಥರಿಗೆ ಶಿಫಾರಸ್ಸು ಮಾಡುತ್ತಾರೆ. ಅಂತಿಮವಾಗಿ ಕಚೇರಿ ಮುಖ್ಯಸ್ಥರು ತೀರ್ಮಾನ ತೆಗೆದುಕೊಂಡು ಅಂತಹ ಕಡತಗಳಿಗೆ ಆದೇಶ ಮಾಡುತ್ತಾರೆ. ಸದರಿಯವರ ಆದೇಶವನ್ನು ವಿಷಯ ನಿರ್ವಾಹಕರು ಹಾಗೂ ಅಧೀಕ್ಷಕರುಗಳು ಅಂತಿಮವಾಗಿ ಪಾಲಿಸುತ್ತಾರೆ.

---

4.4(ಬಿ) 4. ಅದರ ಕಾರ್ಯಗಳ ನಿರ್ವಹಣೆಗೆ ಅದು ರೂಪಿಸಿರುವ ಸೂತ್ರಗಳು:

ಪ್ರಾದೇಶಿಕ ಸಾರಿಗೆ ಆಧಿಕಾರಿಗಳು ಮತ್ತು ಅವರ ಅಧೀನದಲ್ಲಿ ಬರುವ ಸಿಬ್ಬಂದಿಯವರು ಈ ಕೆಳಕಂಡ ಕಾಯ್ದೆ ಮತ್ತು ನಿಯಮದಡಿಯಲ್ಲಿ ಕರ್ತವ್ಯ ನಿರ್ವಹಿಸಲಾಗುತ್ತದೆ.

1. ಕೇಂದ್ರ ಮೋಟಾರು ವಾಹನಗಳ ಕಾಯ್ದೆ 1988
2. ಕೇಂದ್ರ ಮೋಟಾರು ವಾಹನಗಳ ಕಾಯ್ದೆ ನಿಯಮಗಳು 1989
3. ಕರ್ನಾಟಕ ಮೋಟಾರು ವಾಹನ ನಿಯಮಗಳು, 1989
4. ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ ಮತ್ತು ನಿಯಮಗಳು 1957 ಮತ್ತು ಸಂಬಂಧಿಸಿದ ತಿದ್ದುಪಡಿಗಳು.

5.4 (ಬಿ) 5. ನ್ನು ನೆರವೇರಿಸುವುದಕ್ಕಾಗಿ ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ಅಥವಾ ಅದರ ಉದ್ಯೋಗಿಗಳು ಬಳಸುವ ನಿಯಮಗಳು, ಉಪ ನಿಯಮಗಳು, ಅದರ ಕಾರ್ಯಗಳಅನುಸೂಚಿಗಳು , ಕೈಪಿಡಿಗಳು ಮತ್ತು ದಾಖಲೆಗಳು-

1. ಕೇಂದ್ರ ಮೋಟಾರು ವಾಹನಗಳ ಕಾಯ್ದೆ, 1988

2. ಕೇಂದ್ರ ಮೋಟಾರು ವಾಹನಗಳ ಕಾಯ್ದೆ ನಿಯಮಗಳು, 1989

3. ಕರ್ನಾಟಕ ಮೋಟಾರು ವಾಹನ ನಿಯಮಗಳು, 1989.

4. ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ ಮತ್ತು ನಿಯಮಗಳು 1957 ಮತ್ತು ಸಂಬಂಧಿಸಿದ ತಿದ್ದುಪಡಿಗಳು

6.4(ಬಿ)6 ರ ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ವಿವರ ಪಟ್ಟಿ.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತಮ್ಮ ಅಧೀನದಲ್ಲಿ ಬರುವ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರ ಅರ್ಜಿಗಳನ್ನು ಪರಿಶೀಲಿಸಿ ಈ ಕೆಳಕಂಡ ಪ್ರಮುಖ ಕಾರ್ಯಗಳನ್ನು ನಿರ್ವಹಿಸುತ್ತಾರೆ.

1. ವಾಹನಗಳ ನೋಂದಣಿ
2. ಚಾಲನಾ ಹಾಗೂ ನಿರ್ವಾಹಕ ಅನುಜ್ಞಾ ಪತ್ರಗಳನ್ನು ನೀಡುವಿಕೆ.
3. ಸರಕು ಸಾಗಣೆ ಹಾಗೂ ಪ್ರಯಾಣಿಕ ವಾಹನಗಳಿಗೆ ರಹದಾರಿಗಳನ್ನು ನೀಡುವಿಕೆ.
4. ಮೋಟಾರು ವಾಹನಗಳ ತೆರಿಗೆ ಸಂಗ್ರಹಣೆ
5. ಮೋಟಾರು ವಾಹನ ನಿಯಮಗಳ ಪ್ರವರ್ತನೆ
6. ರಸ್ತೆ ಸುರಕ್ಷತಾ ಕ್ರಮಗಳು
7. ವಾಹನಗಳಿಂದಾಗುವ ವಾಯು ಮಾಲಿನ್ಯ ನಿಯಂತ್ರಣದ ಬಗ್ಗೆ ಪ್ರವರ್ತನೆ
8. ಹೆಚ್ಚಿನ ರಾಜಸ್ವವನ್ನು ಸಂಗ್ರಹಿಸುವುದು.

ಈ ಕಚೇರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಮುಖ್ಯಸ್ಥರಾಗಿ ಆಡಳಿತದ ಸಂಪೂರ್ಣ ಜವಾಬ್ದಾರಿ ಹೊಂದಿರುತ್ತಾರೆ.

7.4(ಬಿ) 7. ಅದರ ಕಾರ್ಯನೀತಿಯ ರಚನೆ ಅಥವಾ ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅದರ ಪ್ರಾತಿನಿಧ್ಯವಿರುವಂತೆ ಮಾಡಲು ಇರುವಂತಹ ಯಾವುದೇ ವ್ಯವಸ್ಥೆಯ ವಿವರಗಳು.

8.4(ಬಿ) 8. ಮಂಡಳಿಗಳು, ಪರಿಷತ್ತುಗಳು, ಸಮಿತಿಗಳು ಅಥವಾ ಇತರ ನಿಯಮಗಳು ಮತ್ತು ಅದರ ಭಾಗವಾಗಿ ಅಥವಾ ಅದರ ಸಲಹೆಯ ಉದ್ದೇಶಕ್ಕಾಗಿ ರಚಿತವಾದ ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳನ್ನೊಳಗೊಂಡ ಮಂಡಳಿಗಳ, ಪರಿಷತ್ತುಗಳ,ಸಮಿತಿಗಳ ಮತ್ತು ಇತರ ನಿಯತಕಾಲಿಕ ಸಭೆಗಳು ಸಾರ್ವಜನಿಕರಿಗೆ ಮುಕ್ತವಾಗಿರುತ್ತವೆಯೇ ಅಥವಾ ಅಂತಹ ಸಭೆಗಳ ನಡಾವಳಿಗಳು ಸಾರ್ವಜನಿಕರಿಗೆ ದೊರೆಯುತ್ತವೆಯೇ ಎಂಬುದರ ವಿವರ ಪಟ್ಟಿ.

ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಚಾಮರಾಜನಗರ ಮೋಟಾರು ವಾಹನ ಕಾಯ್ದೆ 1988ರ ಸೆಕ್ಷನ್ 68(1) ಅಡಿಯಲ್ಲಿ ಸಾರಿಗೆ ವಾಹನಗಳ ರಹದಾರಿ ನೀಡುವ ಅಧಿಕಾರ ಹೊಂದಿರುತ್ತಾರೆ.

1) ಅಧ್ಯಕ್ಷರು : ಜಿಲ್ಲಾಧಿಕಾರಿಗಳು
2) ಸದಸ್ಯರು : ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು
3) ಕಾರ್ಯದರ್ಶಿ : ಪ್ರಾದೇಶಿಕ ಸಾರಿಗೆ ಅಧಿಕಾರಿ

9.4(ಬಿ)9. ಅಧಿಕಾರಿಗಳ ಮತ್ತು ನೌಕರರ ನಿರ್ದೇಶಿಕೆ.

| ಕ್ರ ಸಂ | ಪದನಾಮ | ಹುದ್ದೆ | ವಿಳಾಸ |
|---|---|---|---|
| 1 | ಶ್ರೀ ಸುಧಾಮಣಿ.ಎಂ | ಪ್ರಾದೇಶಿಕ ಸಾರಿಗೆ ಅಧಿಕಾರಿ (ಪ್ರಭಾರ) | ಗಣಪತಿ ದೇವಸ್ಥಾನದ ಸರ್ಕಲ್ ಹತ್ತಿರ, ಚಂದ್ರಲೇಔಟ್, ಬೆಂಗಳೂರು |
| 2 | ಶ್ರೀ ಕೆ ಎಂ ವಿಜಯೇಂದ್ರ | ಹಿ. ಮೋ. ವಾ. ನಿ. | ಕುವೆಂಪುನಗರ ಮೈಸೂರು |
| 3 | ಶ್ರೀ ಷಫಿಯುದ್ದಿನ್ ಖಾನ್ | ಹಿ.ಮೋ.ವಾ.ನಿ | ಎನ್ ಆರ್ ಮೋಹಲ್ಲಾ,ಮೈಸೂರು |
| 4 | ಶ್ರೀ ಯೋಗೇಶ್ | ಮೋ ವಾ ನಿ | ಹೌಸಿಂಗ್ ಬೋರ್ಡ್ ಕಾಲೋನಿ ಪಾರೆಸ್ಟ್ ನರ್ಸರಿ ರಸ್ತೆ, ಚಾಮರಾಜನಗರ |
| 5 | ಶ್ರೀ ಕೆ.ವಿ.ನಾಗರಾಜು | ಮೋ ವಾ ನಿ | ಕಲ್ಪುರಗ್ರಾಮ, ಚಾಮರಾಜನಗರ ತಾಲ್ಲೂಕು ಮತ್ತು ಜಿಲ್ಲೆ |
| 6 | ಶ್ರೀ ಗೋಪಾಲ್ ~~ಸಿಂಗ್,ಎಸ್~~ | ಅಧೀಕ್ಷಕರು | ಮನೆ ನಂ: 576 1ನೇ ಕ್ರಾಸ್, ಸಿ ಬ್ಲಾಕ್, ಮಹದೇವಪುರ, ಮೈಸೂರು ದಕ್ಷಿಣ, ಮೈಸೂರು. |
| 7 | ಶ್ರೀ ಡಿ. ಕಮರಶೆಟ್ಟಿ | ಅಧೀಕ್ಷಕರು | ನಂ.1231, ರಾಶಿ ನಿಲಯ ಉಪ್ಪಾರ ಬಡವಣೆ, ಚಾಮರಾಜನಗರ. |
| 8 | ಶ್ರೀ ರಾಜಶೇಖರ ಮೂರ್ತಿ ಎಂ | ಪ್ರ.ದ.ಸ | ಬಿನ್:ಲೇ ಮಹದೇವ.ಎಂ ನಂ.13/189 ಅಂಬೇಡ್ಕರ್ ಬಡಾವಣೆ,ಚಾಮರಾಜನಗರ |
| 9 | ಶ್ರೀ ನಿತಿನ್ ವಿ | ಪ್ರ.ದಸ. | 4ನೇ ಅಡ್ಡ ರಸ್ತೆ ಬುದ್ಧ ನಗರ ಚಾಮರಾಜನಗರ |
| 10 | ಶ್ರೀ ಸಂತೋಷ್.ಎ.ಜೆ | ಪ್ರ.ದಸ. | ಹೌಸಿಂಗ್ ಬೋರ್ಡ ಕಾಲೋನಿ, ಪಾರ್ಕ ರೋಡು, ಚಾಮರಾಜನಗರ (ದೂ ಸಂ. 222444) |
| 11 | ಶ್ರೀ ರಂಜಿತ್ ಕುಮಾರ್.ಎನ್ | ದ್ವಿ ದ ಸ | ಭ್ರಮರಾಂಭ ಬಡಾವಣೆ, 5ನೇ ಕ್ರಾಸ್, ಗಣಪತಿ ದೇವಸ್ಥಾನದ ಹತ್ತಿರ, ಚಾಮರಾಜನಗರ-571313(ದೂ.ಸಂ. 222444) |
| 12 | ಶ್ರೀ ನಂಜುಂಡಯ್ಯ | ಡಿ ದರ್ಜೆ ನೌಕರರು | ಕುದೇರು ಗ್ರಾಮ ಮತ್ತು ಅಂಚೆ, ಚಾಮರಾಜನಗರ ತಾಲೊಕು(ದೂ ಸಂ. 222444) |
| 13 | ಶ್ರೀಮತಿ ಜಯಮ್ಮ | ಡಿ ದರ್ಜೆ ನೌಕರರು | 26, ಅಂಬೇಡ್ಕರ್ ಬಡಾವಣೆ, ಚಾಮರಾಜನಗರ (ದೂ.ಸಂ. 222444) |

10.4(ಬಿ) 10. ಅದರ ವಿ. ನಿಯಮಗಳಲ್ಲಿ ಉಪ ಸಂಬಂಧಿಸಿರುವಂತೆ ಪರಿಹಾರದ ವ್ಯವಸ್ಥೆಯೂ ಸೇರಿದಂತೆ ಅದರ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರರು ಪಡೆಯುವ ತಿಂಗಳ ಗೌರವಧನ.

| ಕ್ರ ಸಂ | ಪದನಾಮ | ಹುದ್ದೆ | ಮೂಲ ವೇತನ |
|---|---|---|---|
| 1 | ಶ್ರೀ ಶಫಿಯುದ್ದೀನ್ | ಹಿ ಮೋ ವಾ ನಿ | 65950=00 |
| 2 | ಶ್ರೀ ಕೆ ಎಂ.ವಿಜಯೇಂದ್ರ | ಹಿ ಮೋ ವಾ ನಿ | 67550=00 |
| 3 | ಶ್ರೀಗೋಪಾಲ್‌ಸಿಂಗ್.ಎಸ್ | ಅಧೀಕ್ಷಕರು | 55350=00 |
| 4 | ಶ್ರೀ ಕಮರಶೆಟ್ಟಿ | ಅಧೀಕ್ಷಕರು | 51400=00 |
| 5 | ಶ್ರೀ ರಾಜಶೇಖರ ಮೂರ್ತಿ ಎಂ | ಪ್ರ.ದ.ಸ | 28950=00 |
| 6 | ಶ್ರೀ ನಿತಿನ್ ವಿ | ಪ್ರ.ದ.ಸ | 28950=00 |
| 7 | ಶ್ರೀ ಸಂತೋಷ್.ಎ.ಜೆ. | ಪ್ರ.ದ.ಸ | 36000=00 |
| 8 | ಶ್ರೀ ರಂಜಿತ್ ಕುಮಾರ್ ಎಸ್ | ದ್ವಿ.ದ.ಸ | 21900=00 |
| 9 | ಶ್ರೀ ನಂಜುಂಡಯ್ಯ | ಡಿ ಗ್ರೂಪ್ | 36000=00 |
| 10 | ಶ್ರೀಮತಿ: ಜಯಮ್ಮ | ಡಿ ಗ್ರೂಪ್ | 26400=00 |

11.4(ಬಿ)11. ಎಲ್ಲಾ ಯೋಜನೆಗಳ ವಿವರಗಳನ್ನು ಸೂಚಿಸುವ, ಪ್ರಸ್ತಾವಿತ ವೆಚ್ಚಗಳನ್ನು ಮತ್ತು ಮಂಡಲದ ಬಟವಾಡೆಗಳ ವರದಿಯನ್ನು ಸೂಚಿಸಿ ಅದರ ಪ್ರತಿಯೊಂದು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯ

*ಅನುದಾನ ಬಿಡುಗಡೆ 2022-23.*

| ಲೆಕ್ಕ ಶೀರ್ಷಿಕೆ | ಅನುದಾನ ಬಿಡುಗಡೆ | ಖರ್ಚಿನ ಬಾಬ್ತು | ಉಳಿದ ಹಣ ಮತ್ತು ಅಧ್ಯರ್ಪಣ . |
|---|---|---|---|
| ಪ್ರವಾಸ ಭತ್ಯೆ 041ಟಿ.ಎ | - | - | - |
| ಕಚೇರಿ ವೆಚ್ಚ 051 | 1550000 | 1505315 | 44685 |
| ವಿದ್ಯುತ್ ವೆಚ್ಚ 071 | 238567 | 222331 | 16236 |
| ಇಂಧನ ವೆಚ್ಚ 195 | 269000 | 229939 | 39061 |
| ಸಾಮಾನ್ಯವೆಚ್ಚ-059 | 740000 | 739504 | 496 |
| ಪ್ರವಾಸ ಭತ್ಯೆ - ಐ ಎಂ ವಿ 041ಟಿ.ಎ | - | - | - |
| ಕಚೇರಿ ವೆಚ್ಚ-051 ಪ್ಲಾನ್ | - | - | - |
| ಟಿ ಸಿ 125(ರಸ್ತೆ ಸುರಕ್ಷತೆ) | - | - | - |
| 422, 423(ಎಸ್‌ಸಿಪಿ/ಟಿಎಸ್‌ಪಿ) | - | - | - |
| ರೈತಸಾರಥಿ ಯೋಜನೆಯಡಿ ಬಿಡುಗಡೆಯಾದ ಲೆಕ್ಕ ಶೀರ್ಷಿಕೆ 2041-00-102-0-03 | - | - | - |
| ವಾಯುಮಾಲಿನ್ಯ ಮಾಸಾಚಾರಣೆ | - | - | - |

12.4(ಬಿ)12. ಹಂಚಿಕೆ ಮಾಡಲಾದ ಮೊಬಲಗನ್ನೊಳಗೊಂಡು, ಸಹಾಯಧನ ಕಾರ್ಯಕ್ರಮಗಳ ಜಾರಿಯ ವಿಧಾನವನ್ನು ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳು:

2022-23ನೇ ಸಾಲಿನಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಯಾವುದೇ ಅನುದಾನವು ಬಿಡುಗಡೆಯಾಗಿರುವುದಿಲ್ಲ,

13.4(ಬಿ) 13. ಅದು ನೀಡಿರುವ ರಿಯಾಯಿತಿಗಳನ್ನು ಅನುಮತಿ ಪತ್ರಗಳನ್ನು ಅಥವಾ ಅಧಿಕಾರ ಪತ್ರಗಳನ್ನು ಪಡೆಯುವವರ ವಿವರಗಳು.

-ಇರುವುದಿಲ್ಲ-

14.4(ಬಿ)14. ಅದರ ಬಳಿ ಲಭ್ಯವಿರುವ ಅಥವಾ ಅದು ಹೊಂದಿರುವ ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ ಮಾಹಿತಿಗೆ ಸಂಬಂಧಿಸಿದ ವಿವರಗಳು.

ಸಾರಿಗೇತರ ಹೊಸ ವಾಹನಗಳ ನೋಂದಣಿ, ಚಾಲನಾ ಅನುಜ್ಞಾ ಪತ್ರ, ಅನುಜ್ಞಾ ಚಾಲನಾ ಪತ್ರದ ನವೀಕರಣ, ಹೆಚ್ಚುವರಿ ವಾಹನ ಚಾಲನೆಗೆ ಹಿಂಬರಹ ಶುಲ್ಕ ಪಾವತಿ, ತೆರಿಗೆ ಪಾವತಿ.

15.4(ಬಿ)15. <u>ಸಾರ್ವಜನಿಕ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿದ್ದಲ್ಲಿ ಅದರ ಕೆಲಸ ಸಮಯವನ್ನೊಳಗೊಂಡಂತೆ ಮಾಹಿತಿ ಪಡೆಯಲು ಸಾರ್ವಜನಿಕರಿಗೆ ಲಭ್ಯವಿರುವ ಸೌಲಭ್ಯಗಳ ವಿವರಗಳು:</u>

ಕಚೇರಿ ಸಮಯ:

ಬೆಳಿಗ್ಗೆ 10.00 ರಿಂದ 01.30 ರವರೆಗೆ

ಮಧ್ಯಾಹ್ನ 02.15 ರಿಂದ 05.30ರ ವರೆಗೆ

ಶುಲ್ಕ ಪಾವತಿಸುವ ಸಮಯ: ಸೋಮವಾರದಿಂದ ಶುಕ್ರವಾರದವರೆಗೆ

ಬೆಳಿಗ್ಗೆ 10.00 ರಿಂದ 02.30ರ ವರೆಗೆ

ಶನಿವಾರ ಬೆಳಿಗ್ಗೆ 10.00 ರಿಂದ 12.30 ರವರೆಗೆ

ಸಾರ್ವಜನಿಕರ ಉಪಯೋಗಕ್ಕಾಗಿ ಗ್ರಂಥಾಲಯ ಅಥವಾ ವಾಚನಾಲಯ ಈವರೆಗೆ ಅಸ್ತಿತ್ವದಲ್ಲಿ ಇರುವುದಿಲ್ಲ.

16. 4(ಬಿ)16.ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರು, ಪದನಾಮ ಮತ್ತು ಇತರ ವಿವರಗಳು.

1) ಸಾರ್ವಜನಿಕ ಮಾಹಿತಿ ಅಧಿಕಾರಿ:- ಶ್ರೀಮತಿ ಸುಧಾಮಣಿ.ಎಂ, ಪ್ರಭಾರ ಪ್ರಾದೇಶಿಕ ಸಾರಿಗೆ ಅಧಿಕಾರಿ.

2) ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ: ಶ್ರೀ: ಕಮರಶೆಟ್ಟಿ.ಡಿ, ಅಧೀಕ್ಷಕರು

3) ಮೇಲ್ಮನವಿ ಪ್ರಾಧಿಕಾರ:- ಶ್ರೀ ಸಿ.ಟಿ ಮೂರ್ತಿ, ಮಾನ್ಯ ಜಂಟಿ ಸಾರಿಗೆ ಆಯುಕ್ತರು, ಮೈಸೂರು ವಿಭಾಗ, ಮೈಸೂರು, ಚಾಮರಾಜಪುರಂ, ಮೈಸೂರು-570 005.

ಅ) ಈ ಕಚೇರಿಗೆ 2022-23ನೇ ಸಾಲಿನಲ್ಲಿ ಒಟ್ಟು ರೂ.44,31,97,000=00 ರಾಜಸ್ವ ವಸೂಲಾತಿ ನಿಗದಿಪಡಿಸಲಾಗಿದ್ದು, ಸದರಿ ಸಾಲಿನಲ್ಲಿ ರೂ.37,57,93,279=00 ವಸೂಲಿ ಮಾಡಿ ಶೇ. 84.79 ರಷ್ಟು ಗುರಿ ಸಾಧಿಸಲಾಗಿದೆ.

ಆ) ಕೇಂದ್ರ ಕಚೇರಿಯಾದ ಮಾನ್ಯ ಸಾರಿಗೆ ಆಯುಕ್ತರ ಕಚೇರಿ, ಬೆಂಗಳೂರಿನಿಂದ ಬಿಡುಗಡೆಯಾದ ವೆಬ್‌ಸೈಟ್ https://transport.karnataka.gov.in ರಲ್ಲಿ ಸಾರ್ವಜನಿಕರು ತಮ್ಮ ಕೆಲಸ ಕಾರ್ಯಗಳಿಗೆ ಅನುಸರಿಸಬೇಕಾದ ಸೂಕ್ತ ಮಾರ್ಗದರ್ಶನ ಪ್ರಕಟಿಸಲಾಗಿದೆ.

17.4(ಬಿ) 17 ಕಛೇರಿಯಲ್ಲಿ ನಿರ್ವಹಿಸಲಾಗಿರುವ ಎಲ್ಲಾ ಮಾಹಿತಿಗಳನ್ನು ಪ್ರಕಟಿಸಲಾಗಿದೆ ಮತ್ತು ಮಾಹಿತಿಗಳನ್ನು ದಿನಾಂಕ 31.03.2023 ರ ವರೆಗೆ ಪರಿಷ್ಕರಿಸಲಾಗಿದೆ.

ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ
ಪ್ರಾದೇಶಿಕ ಸಾರಿಗೆ ಅಧಿಕಾರಿ
ಚಾಮರಾಜನಗರ